ಇ) ಕಟ್ಟೆಯ ಮೇಲೆ ಛಾವಣಿ ಅಳವಡಿಸುವುದು ಸೂಕ್ತವಾಗಿಲ್ಲದ ಕಾರಣ ಬಸ್ ನಿಲ್ದಾಣದ ಕಟ್ಟಡವನ್ನು ವಿಸ್ತರಿಸುವ ಯೋಜನೆ ಪರಿಶೀಲನೆಯಲ್ಲಿದೆ.

ವಿಷಯ:- ರಾಜ್ಯದಲ್ಲಿ ಬಗರ್‌ಹುಕುಂ ಸಾಗುವಳಿದಾರರಿಗೆ ಜಮೀನು ಖಾಯಂಗೊಳಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 222 (296)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ):- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿ ಬಗರ್‌ಹುಕುಂ ಸಾಗುವಳಿದಾರರಿಗೆ ಇದುವರೆಗೆ ಜಮೀನು ಖಾಯಂ ಮಾಡದೆ ಇದ್ದು, ಈಗ ನಗರ ಪ್ರದೇಶಗಳು ಬೆಳೆದಿರುವುದರಿಂದ 5 ಕಿ.ಮೀ. ಒಳಗೆ ಬಗರ್‌ಹುಕುಂ ಜಮೀನು ಮಾಡುತ್ತಿರುವವರಿಗೆ ಕಾನೂನು ತೊಡಕಿನಿಂದ ಖಾಯಂ ಆಗದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಕಾನೂನಿಗೆ ತಿದ್ದುಪಡಿ ತಂದು ಖಾಯಂ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ರಮೇಶ್ ಸಿ.ಜಿಗಜಿಣಗಿ (ಕಂದಾಯ ಸಚಿವರು):-

ಅ) ಸದರಿ ವಿಷಯದ ಬಗ್ಗೆ ಸರ್ಕಾರವು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿ ಸಂಬಂಧಪಟ್ಟ ಕಾಯಿದೆಗೆ ಸೂಕ್ತ (ತಿದ್ದುಪಡಿ ಕಾಯಿದೆ ಸಂಖ್ಯೆ :33:94 ದಿನಾಂಕ 3.10.94ರಲ್ಲಿ) ತಿದ್ದುಪಡಿ ಮಾಡಿ 50,000ಕ್ಕಿಂತ ಕಡಿಮೆ ಜನಸಂಖ್ಯೆ ಇರುವ ನಗರಸಭೆಗಳ 5 ಕಿ.ಮೀ.ಗಳ ಒಳಗೆ ಬರುವ ಅಕ್ರಮ ಸಾಗುವಳಿಯನ್ನು ಸಕ್ರಮಗೊಳಿಸುವ ಅವಕಾಶವನ್ನು ಕಲ್ಪಿಸಲಾಗಿದೆ.

ವಿಷಯ:- 95-96ರಲ್ಲಿ ಆರಾಧನಾ ಯೋಜನೆಯಡಿಯಲ್ಲಿ ಶಿವಮೊಗ್ಗ ವಿಧಾನಸಭಾಕ್ಷೇತ್ರದಲ್ಲಿ ಖರ್ಚು ಮಾಡಿರುವ ಹಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 224 (295)

ಶ್ರೀ ಕೆ.ಎಸ್.ಈಶ್ವರಪ್ಪ (ಶಿವಮೊಗ್ಗ):- ಮಾನ್ಯ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿ 1995-96ಕ್ಕೆ ಆರಾಧನಾ ಯೋಜನೆಯಡಿಯಲ್ಲಿ ನಿಗಧಿಪಡಿಸಿದ ಹಣ ಎಷ್ಟು ಹಾಗೂ ಜಿಲ್ಲಾವಾರು ಉಪಯೋಗ ಆಗಿರುವ ಹಣವೆಷ್ಟು?

ಆ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರದ ಆರಾಧನಾ ಸಮಿತಿ ತೀರ್ಮಾನಿಸಿರುವ ದೇವಾಲಯಗಳ ನಿರ್ಮಾಣ ಕಾರ್ಯ ನಿಧಾನ ಆಗುತ್ತಿರುವುದಕ್ಕೆ ಕಾರಣ ಏನು ಹಾಗೂ ಈ ನಿರ್ಮಾಣಕಾರ್ಯವನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಬಿ.ಮುನಿಯಪ್ಪಮುದ್ದಪ್ಪ (ಮುಜರಾಯಿ ಸಚಿವರು):-

ಅ) 1995-96ನೇ ಸಾಲಿನಲ್ಲಿ ಆರಾಧನಾ ಯೋಜನೆಯಡಿ ರೂ.5.00 ಕೋಟಿ ಆಯವ್ಯಯದಲ್ಲಿ ನೀಡಿದ್ದು, ರೂ.4.50 ಕೋಟಿ ಬಿಡುಗಡೆಯಾಗಿದೆ. ಈ ಹಣವನ್ನು ಇನ್ನು ಉಪಯೋಗವಾಗಿರುವುದಿಲ್ಲ.

ಆ) ಸದರಿ ವಿಧಾನಸಭಾ ಕ್ಷೇತ್ರದಲ್ಲಿ ರೂ.4.20 ಲಕ್ಷಗಳನ್ನು 22 ಸಂಸ್ಥೆಗಳಿಗೆ ಸಮಿತಿಯು ಮಂಜೂರಾತಿ ನೀಡಿದ್ದು ಅದರಲ್ಲಿ 7 ಸಂಸ್ಥೆಗಳ ಅಂದಾಜುಪಟ್ಟಿ ಮತ್ತು ನಕ್ಷೆಗೆ ಆಡಳಿತ ಮಂಜೂರಾತಿ ನೀಡಿ ಕಾಮಗಾರಿ ಪ್ರಗತಿಯಲ್ಲಿದೆ. ಉಳಿದ 15 ಸಂಸ್ಥೆಗಳ ನಕ್ಷೆ ಮತ್ತು ಅಂದಾಜುಪಟ್ಟಿಯನ್ನು ಪಂಚಾಯತ್ ಅಭಿಯಂತರರಿಂದ ಪಡೆದು ಆಡಳಿತ ಮಂಜೂರಾತಿ ನೀಡಿ ಈ ಕಾರ್ಯಗಳನ್ನು ತುರ್ತಾಗಿ ಪ್ರಾರಂಭಿಸಲಾಗುವುದು. ಈ ಕಾಮಗಾರಿಗಳಿಗೆ 93-94 ಮತ್ತು 94-95 ಸಾಲಿನಲ್ಲಿ ಬಿಡುಗಡೆಯಾದ ಹಣವನ್ನು ಉಪಯೋಗಿಸಲಾಗುತ್ತಿದೆ.

ವಿಷಯ:- ಗ್ರಾಮ ಸಹಾಯಕರಿಗೆ ಗೌರವ ಸಂಭಾವನೆಯಲ್ಲಿ ಹೆಚ್ಚಳ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 226 (373)

ಶ್ರೀ ಗೋವಿಂದ ಎಂ.ಕಾರಜೋಳ (ಮುಧೋಳ):- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದಲ್ಲಿ ನೇಮಕಗೊಂಡಿರುವ ಗ್ರಾಮ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡುವುದು).

ಆ) ಗ್ರಾಮ ಸಹಾಯಕರ ಹುದ್ದೆಯನ್ನು ರೋಸ್ಟರ್ ಪದ್ಧತಿಯ ಮೂಲಕ ನೇಮಕ ಮಾಡಿಕೊಳ್ಳಲಾಗಿದೆಯೇ, ಹಾಗಿದ್ದಲ್ಲಿ ನೇಮಕಗೊಂಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಸಂಖ್ಯೆ ಎಷ್ಟು?

ಇ) ಇವರಿಗೆ ನೀಡುತ್ತಿರುವ ಗೌರವ ಸಂಭಾವನೆಯನ್ನು ಹೆಚ್ಚಿಸಲು ಸಾಧ್ಯವೇ?

ಶ್ರೀ ರಮೇಶ್ ಸಿ.ಜಿಗಜಿಣಗಿ (ಕಂದಾಯ ಸಚಿವರು):-

ಅ) 10450 (ಜಿಲ್ಲಾವಾರು ವಿವರ ಲಗತ್ತಿಸಿದೆ.)

ಆ) ಸದರಿ ಹುದ್ದೆಗಳು ಮಿತ ವೇತನ ಹುದ್ದೆಗಳಾಗಿದ್ದು, ವೃಂದ ಮತ್ತು ನೇಮಕಾತಿ ನಿಯಮದಡಿಯಲ್ಲಿ ಬಾರದೇ ಇರುವುದರಿಂದ, ರೋಸ್ಟರ್ ಪದ್ಧತಿ ಅನ್ವಯಿಸುವುದಿಲ್ಲ.

ಇ) ನಿಗಧಿತ ಸಂಭಾವನೆ ಮಾಸಿಕ ರೂ.600.00ರಿಂದ ರೂ.800.00ಕ್ಕೆ ದಿನಾಂಕ 1.1.94ರಿಂದ ಹೆಚ್ಚಿಸಿರುವುದರಿಂದ ಸದ್ಯದ ಪರಿಸ್ಥಿತಿಯಲ್ಲಿ ಪುನಃ ಹೆಚ್ಚಿಸಲು ಸಾಧ್ಯವಿರುವುದಿಲ್ಲ.